# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/36/2021-22 ದಿನಾಂಕ: 06-04-2022.

ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21, ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ. 10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 06-04-2022 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಜೂಮ್ ಅಪ್ಲಿಕೇಷನ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀಮತಿ. ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು
3. ಶ್ರೀಮತಿ ಡಾ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿಗಳು,
4. ಶ್ರೀ. ಬಾಷಾ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯು.ಎಸ್.ಎಸ್.ಬಿ,
5. ಶ್ರೀ. ನವೀನ್, ಕಿರಿಯ ಆರೋಗ್ಯ ಪರಿವೀಕ್ಷಕರು, ಬಿಬಿಎಂಪಿ
6. ಪಾಲಿಕೆಯ ಘನತ್ಯಾಜ್ಯ ನಿರ್ವಹಣೆ ತಂಡ
7. ಶ್ರೀ. ದಯಾಳ್, ಸದಸ್ಯರು,
8. ಶ್ರೀ. ಆರ್. ಎಂ. ಶ್ರೀನಿವಾಸ್, ಸದಸ್ಯರು
9. ಶ್ರೀ. ದಯಾಳ್, ಸದಸ್ಯರು
10. ಶ್ರೀ. ಮಲ್ಯಾದ್ರಿ, ಸದಸ್ಯರು

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸಭೆಯನ್ನು ಪ್ರಾರಂಭಿಸಿದರು. ಹಿಂದಿನ ಸಭೆಯ ನಡವಳಿಯನ್ನು ಸಭೆಯಲ್ಲಿ ಓದಿ, ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

<u>ದಿನಾಂಕ: 06-04-2022 ರ ಸಭೆಯ ನಡಾವಳಿಗಳು:</u>

**ಶ್ರೀಮತಿ ಡಾ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ:-**

- ವಾರ್ಡಿನಲ್ಲಿ ವ್ಯಾಕ್ಸಿನೇಷನ್ ನಡೆಸುತ್ತಿದ್ದ ತಂಡಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿರುತ್ತದೆ. ಆದ್ದರಿಂದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮಾತ್ರ ವ್ಯಾಕ್ಸಿನೇಷನ್ ಮತ್ತು ಕೋವಿಡ್ ಪರೀಕ್ಷಗಳು ನಡೆಸಲಾಗುತ್ತಿದೆ ಎಂದು ತಿಳಿಸಿದರು.
- ಪ್ರಸ್ತುತ 15 ವರ್ಷದ ಮಕ್ಕಳಿಕೆ ವ್ಯಾಕ್ಸಿನೇಷನ್ ಪೂರ್ಣಗೊಂಡಿರುತ್ತದೆ, ಮತ್ತು 12 ರಿಂದ 14 ವರ್ಷದೊಳಗಿನ ಮಕ್ಕಳಿಗೆ ವ್ಯಾಕ್ಸಿನೇಷನ್ ನೀಡುವ ಕಾರ್ಯಕ್ರಮ ಚಾಲ್ತಿಯಲ್ಲಿರುತ್ತದೆ. ಹಾಗೂ ಸದರಿ ಕಾರ್ಯಕ್ರಮವನ್ನು ಏಪ್ರಿಲ್ 10 ರೊಳಗೆ ಪೂರ್ಣಗೊಳಿಸಲು ಆದೇಶವಿರುತ್ತದೆ ಎಂದು ತಿಳಿಸಿದರು.
- ಯಾವುದೇ ವ್ಯಕ್ತಿಗೆ ಕೋವಿಡ್ ಪಾಸಿಟಿವ್ ಬಂದಿದ್ದಲ್ಲಿ, ಗುಣಮುಖರಾದ 90 ದಿನಗಳ ನಂತರ ವ್ಯಾಕ್ಸಿನೇಷನ್ ನೀಡಲಾಗುವುದು ಎಂದು ತಿಳಿಸಿದರು.
- 2ನೇ ಡೋಸ್ ವ್ಯಾಕ್ಸಿನೇಷನ್ ಮುಗಿದ 9 ತಿಂಗಳ ನಂತರ ಬೂಸ್ಟರ್ ಡೋಸ್ ವಾಕ್ಸಿನ್ ಪಡೆಯಬಹುದಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

**ಬಿ.ಡಬ್ಲ್ಯೂ.ಎಸ್.ಎಸ್.ಬಿ. (ನೀರಿನ ಸಮಸ್ಯೆ):**

- ವಾರ್ಡಿನ ಎಲ್ಲ ಪ್ರದೇಶಗಳಲ್ಲಿ ನೀರು ಸರಬರಾಜು ಮಾಡುತ್ತಿರುವ ಸಮಯವು ಕಡಿಮೆ ಮಾಡಲಾಗಿರುತ್ತದೆ ಮತ್ತು ನೀರು ಮೊದಲಿನಂತೆ ಸಮರ್ಪಕವಾಗಿ ಸರಬರಾಜು ಮಾಡುತ್ತಿರುವುದಿಲ್ಲವೆಂದು ಸದಸ್ಯರುಗಳು ಸಮಸ್ಯೆಯನ್ನು ತಿಳಿಸಿರುತ್ತಾರೆ.
  - ವಿದ್ಯುತ್ ಸಮಸ್ಯೆಯಿಂದ ನೀರು ಸರಬರಾಜು ವ್ಯತ್ಯಯವಾಗಿರುತ್ತದೆ. ಮುಂದಿನ ದಿನಗಳಲ್ಲಿ ಸಮಸ್ಯೆಯನ್ನು ಪರಿಹರಿಸಲಾಗುವುದು ಎಂದು ಶ್ರೀ. ಬಾಷಾ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯು.ಎಸ್.ಎಸ್.ಬಿ ರವರು ಸಭೆಯಲ್ಲಿ ತಿಳಿಸಿದರು.

- ಕಾಳಪ್ಪ ಲೇಔಟ್, ರಾಘವೇಂದ್ರ ದೇವಸ್ಥಾನದ ಹಿಂಭಾಗ ಮತ್ತು ರಾಮಚಂದ್ರಪುರದ ಪಟೇಲರ ಮನೆಯ ಹತ್ತಿರ ಬಿ.ಡಬ್ಲ್ಯು.ಎಸ್.ಎಸ್.ಬಿ ವತಿಯಿಂದ ನಿರ್ವಹಿಸುತ್ತಿರುವ ಬೋರ್‌ವೆಲ್ ನೀರಿನಲ್ಲಿ ಸಿಲ್ಟ್ ಮಿಶ್ರಣದ ನೀರು ಬರುತ್ತಿದ್ದು, ಇದನ್ನು ಕೂಡಲೇ ಸರಿಪಡಿಸಲು ಕೋರಿರುತ್ತಾರೆ. ಮತ್ತು ಕೆಲವು ಬೋರ್‌ವೆಲ್‌ಗಳಲ್ಲಿ ಪ್ಯಾನಲ್ ಬೋರ್ಡ್‌ಗಳಿರುವುದಿಲ್ಲ, ಇದನ್ನು ಸರಿಪಡಿಸಲು ಕೋರಿರುತ್ತಾರೆ.

**ತೋಟಗಾರಿಕಾ ಇಲಾಖೆ:**

- ದೊಡ್ಡಬೊಮ್ಮಸಂದ್ರ ಕೆರೆಯ ಆವರಣದಲ್ಲಿರುವ ಗಿಡ-ಮರಗಳಿಗೆ ಸರಿಯಾಗಿ ನೀರಿನ ಪೂರೈಕೆ ಆಗದ ಕಾರಣ ಗಿಡ-ಮರಗಳು ಒಣಗುತ್ತಿರುತ್ತವೆ ಎಂದು ಸಭೆಯಲ್ಲಿದ್ದ ಸದಸ್ಯರುಗಳು ತಿಳಿಸಿ, ಗಿಡ-ಮರಗಳಿಗೆ ಸಮರ್ಪಕವಾಗಿ ನೀರು ಪೂರೈಸಲು ಕೋರಿರುತ್ತಾರೆ.

**ಕೆರೆಗಳ ವಿಭಾಗ:**

- ದೊಡ್ಡಬೊಮ್ಮಸಂದ್ರ ಕೆರೆಯ ನೀರನ್ನು ಖಾಲಿ ಮಾಡಿ ಕೆರೆಯ ಹೂಳನ್ನು ತೆಗೆಯುವುದಾಗಿ ಈ ಮೊದಲು ತಿಳಿಸಿರುತ್ತಾರೆ. ಪ್ರಸ್ತುತ ಕೆರೆಯ ನೀರನ್ನು ಖಾಲಿ ಮಾಡಿದ್ದು, ಕೆರೆಯ ಅಂಗಳ ಸಂಪೂರ್ಣವಾಗಿ ಒಣಗಿದ್ದು ಇದುವರೆಗೂ ಹೂಳನ್ನು ತೆಗೆಯಲು ಯಾವುದೇ ಕ್ರಮಕೈಗೊಂಡಿರುವುದಿಲ್ಲವಾದ್ದರಿಂದ ದೊಡ್ಡಬೊಮ್ಮಸಂದ್ರ ಪ್ರದೇಶದ ಅಂತರ್ಜಲ ಮಟ್ಟ ಕಡಿಮೆಯಾಗಿರುವುದರಿಂದ ಬೋರ್‌ವೆಲ್‌ಗಳಲ್ಲಿ ನೀರು ಕಡಿಮೆ ಆಗಿರುತ್ತದೆ ಮತ್ತು ಕೆಲವು ಬೋರ್‌ವೆಲ್‌ಗಳಲ್ಲಿ ಸಿಲ್ಟ್ ಬರುತ್ತಿರುತ್ತದೆ.

**ಬೀದಿ ದೀಪಗಳು:**

- ದೊಡ್ಡಬೊಮ್ಮಸಂದ್ರ ವ್ಯಾಪ್ತಿಯಲ್ಲಿ ಕೆಲವು ಕಡೆ ಬೀದಿ ದೀಪಗಳು ಹಾಳಾಗಿದ್ದು, ದುರಸ್ಥಿ ಕಾರ್ಯವನ್ನು ಕೂಡಲೇ ಕೈಗೊಳ್ಳಲು ಕೋರಿರುತ್ತಾರೆ.

ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

ನೋಡಲ್ ಅಧಿಕಾರಿ ವಾರ್ಡ್-10 ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿ ಆಯುಕ್ತರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯ ಅಭಿಯಂತರರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
5. ಆರೋಗ್ಯ ವೈದ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರಿಗೆ ಸಲ್ಲಿಸಿ ಸಭೆಗೆ ಹಾಜರಾಗಲು ಕೋರಿದೆ.
6. ಸಹಾಯಕ ಕಂದಾಯ ಅಧೀಕಾರಿಗಳು, ಕಂದಾಯ ವಿಭಾಗ, ವಿದ್ಯಾರಣ್ಯಪುರ ವಿಭಾಗ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿದ್ಯಾರಣ್ಯಪುರ ವಿಭಾಗ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೀದಿ ದೀಪಗಳ ನಿರ್ವಹಣೆ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
12. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೋಲೀಸ್ ಠಾಣೆ (ಸಂಚಾರ) ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೋಲೀಸ್ ಠಾಣೆ (ಲಾ ಮತ್ತು ಆರ್ಡರ್) ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
14. ಕಛೇರಿ ಕಡತಕ್ಕೆ.